ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಕರುಗಳ ನೇಮಕಾತಿ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 10 (33)

ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)

ಅ) ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ದೈಹಿಕ ಶಿಕ್ಷಕರುಗಳ ಸಂಖ್ಯೆ ಎಷ್ಟು ; ಮಂಜೂರಾದ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು : (ವಿವರ ನೀಡುವುದು)

ಆ) ಖಾಲಿ ಇರುವ ಹುದ್ದೆಗಳಿಗೆ ದೀರ್ಘಕಾಲದಿಂದಲೂ ನೇಮಕಾತಿ ಮಾಡದಿರಲು ಕಾರಣಗಳೇನು; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು :

ಇ) ಪ್ರೊ. ವೈದ್ಯನಾಥನ್ ಸಮಿತಿಯ ಶೀಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಹುದ್ದೆಗಳ ಭರ್ತಿಗಾಗಿ ಸರ್ಕಾರದ ಸಕಾಲಿಕ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸೇವೆ ಸಲ್ಲಿಸುತ್ತಿರುವ ದೈಹಿಕ ಶಿಕ್ಷಕರುಗಳ ಸಂಖ್ಯೆ 6278
ಮಂಜೂರಾದ ಹುದ್ದೆಗಳ ಸಂಖ್ಯೆ 6772
ಖಾಲಿ ಇರುವ ಹುದ್ದೆಗಳ ಸಂಖ್ಯೆ 494

ಆ) SSAಅಡಿಯಲ್ಲಿ ದೈಹಿಕ ಶಿಕ್ಷಣ, ಚಿತ್ರಕಲೆ ಇತ್ಯಾದಿ ಶಿಕ್ಷಕರನ್ನು ಬಾಹ್ಯ ಮೂಲದಿಂದ ನೇಮಕಾತಿ ಮಾಡಿ ಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ. ಖಾಯಂ ಹುದ್ದೆ ಭರ್ತಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಇ) (1) ದೈಹಿಕ ಶಿಕ್ಷಕರ ಪಠ್ಯ ಪುಸ್ತಕ ರಚನೆಯಾಗಿ ಕಳೆದ ಮೂರು ವರ್ಷಗಳಿಂದ ಶಾಲೆಗಳಲ್ಲಿ ಭೋದಿಸಲಾಗುತ್ತಿದೆ.

(2) ತಾಲ್ಲೂಕು ಜಿಲ್ಲಾ ವಿಭಾಗ ರಾಜ್ಯ ಹಂತದಲ್ಲಿ ಹುದ್ದೆಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆ.

(3) ಉಳಿದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.

ಪ್ರೌಢಶಾಲಾ ಶಿಕ್ಷಕರಿಗೆ ವೇತನ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ (51)

ಶ್ರೀ ಖಾದರ್ ಯು.ಟಿ. (ಮಂಗಳೂರು)

ಅ) ದಕ್ಷಿಣ ಕನ್ನಡ ಜಿಲ್ಲೆಯ ಪ್ರೌಢ ಶಾಲಾ ಶಿಕ್ಷಕರಿಗೆ ವೇತನ ನೀಡುವಲ್ಲಿ ತಿಂಗಳಾನುಗಟ್ಟಲೆ ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರೌಢ ಶಾಲಾ ಶಿಕ್ಷಕರಿಗೆ ನಿಗದಿತ ಸಮಯದಲ್ಲಿ ವೇತನ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) 2012-13 ನೇ ಸಾಲಿನ ಆಯವ್ಯಯ ಲಿಂಕ್‌ಡಾಕ್ಯುಮೆಂಟ್‌ನಲ್ಲಿ ನಿಗದಿಪಡಿಸಿದ ಅನುದಾನದ ಕೊರತೆ ಇದ್ದ ಕಾರಣ ಕೆಲವು ಜಿಲ್ಲೆಗಳಿಗೆ ಅಗತ್ಯವಿರುವ ಹೆಚ್ಚುವರಿ ಅನುದಾನವನ್ನು ಸರ್ಕಾರದ ಆದೇಶ ಸಂಖ್ಯೆ ಆಇ501 ವೆಚ್ಚ 6/2012 ದಿನಾಂಕ: 04/01/2013 ರಲ್ಲಿ ಒಟ್ಟು ರೂ. 1437.98 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ. ಇದೇ ಆದೇಶದಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ರೂ.819.95 ಲಕ್ಷಗಳ ಅನುದಾನ ಹೆಚ್ಚುವರಿಯಾಗಿ ಬಿಡುಗಡೆಯಾಗಿರುತ್ತದೆ.